ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE 29/3/2021

ಸಿ.ಡಿ ಪ್ರಕರಣ: ರಾಷ್ಟ್ರಮಟ್ಟದಲ್ಲಿ ಕರ್ನಾಟಕದ ಮಾನ ಹರಾಜು– ಸಿದ್ದರಾಮಯ್ಯ

# ‘ಸಂತ್ರಸ್ತೆ ಪತ್ತೆಗೆ ಪೊಲೀಸರು ವಿಫಲ’

ಪ್ರಜಾವಾಣಿ ವಾರ್ತೆ 29-3-21

ಬೆಂಗಳೂರು: ‘ಸಿ.ಡಿ ಪ್ರಕರಣದಿಂದ ರಾಷ್ಟ್ರಮಟ್ಟದಲ್ಲಿ ಕರ್ನಾಟಕದ ಮಾನ ಹರಾಜು ಆಗುತ್ತಿರುವುದಕ್ಕೆ ರಾಜ್ಯ ಸರ್ಕಾರ ಮತ್ತು ಪೊಲೀಸರ ವೈಫಲ್ಯವೇ ಕಾರಣ. ಪ್ರಕರಣ ನಡೆದು 26 ದಿನಗಳು ಕಳೆದರೂ ಸಂತ್ರಸ್ತೆಯನ್ನು ಪತ್ತೆಹಚ್ಚಲು ಪೊಲೀಸರಿಗೆ ಆಗದಿರುವುದು ನಾಚಿಕೆಗೇಡಿನ ಸಂಗತಿ’ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ಟೀಕಿಸಿದ್ದಾರೆ.



ಸರಣಿ ಟ್ವೀಟ್ ಮಾಡಿರುವ ಅವರು, ‘ರಾಜಕೀಯ ಕೆಸರೆರಚಾಟಕ್ಕೆ ಕಾರಣವಾಗಿರುವ ಸಿ.ಡಿ ಹಗರಣದ ತನಿಖೆ ತಾರ್ಕಿಕ ಅಂತ್ಯ ಕಾಣಲು ಸಂತ್ರಸ್ತೆ ಪೊಲೀಸರ ಮುಂದೆ ಹಾಜರಾಗಿ ಹೇಳಿಕೆ ನೀಡಬೇಕು. ಕಾನೂನುಬದ್ಧವಾದ ಅವಳ ಹಕ್ಕನ್ನು ಚಲಾಯಿಸದಂತೆ ತಡೆಯುತ್ತಿರುವವರು ಯಾರು’ ಎಂದು ಪ್ರಶ್ನಿಸಿದ್ದಾರೆ.

‘ಸಂತ್ರಸ್ತೆ ಅಜ್ಞಾತ ಸ್ಥಳದಿಂದ ನಿರಂತರವಾಗಿ ತನ್ನ ಹೇಳಿಕೆಗಳ ಸಿ.ಡಿಗಳನ್ನು ಮಾಧ್ಯಮಗಳಿಗೆ ಬಿಡುಗಡೆ ಮಾಡುತ್ತಿದ್ದಾಳೆ. ತನ್ನ ವಕೀಲನ ಮೂಲಕ ಪೊಲೀಸರಿಗೆ ದೂರು ಕಳುಹಿಸಿಕೊಡುತ್ತಿದ್ದಾಳೆ. ತಂದೆ-ತಾಯಿ ಜೊತೆ ಮಾತನಾಡುತ್ತಿದ್ದಾಳೆ. ಹೀಗಿದ್ದರೂ ಪೊಲೀಸರ ಕೈಗೆ ಮಾತ್ರ ಸಿಗುತ್ತಿಲ್ಲ ಎಂದರೆ ಏನು ಅರ್ಥ’ ಎಂದೂ ಪ್ರಶ್ನಿಸಿದ್ದಾರೆ.

‘ಮಾಧ್ಯಮಗಳಲ್ಲಿ ಪ್ರಕಟವಾಗಿರುವ ಯುವತಿಯದ್ದೆನ್ನಲಾದ ಹೇಳಿಕೆಗಳನ್ನು ಗಮನಿಸಿದರೆ ಆಕೆಗೆ ರಾಜ್ಯ ಸರ್ಕಾರದ ಮೇಲಾಗಲಿ, ಪೊಲೀಸರ ಮೇಲಾಗಲಿ ನಂಬಿಕೆ ಇಲ್ಲ. ಗೃಹ ಸಚಿವ ಬೊಮ್ಮಾಯಿ ಈ ಬಗ್ಗೆ ಗಮನಹರಿಸಬೇಕು’ ಎಂದಿದ್ದಾರೆ.

‘ಪೊಲೀಸ್ ಇಲಾಖೆ ಸೇರಿದಂತೆ ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದು ಬಿದ್ದಿರುವುದಕ್ಕೆ ಈ ಹಗರಣ ಸಾಕ್ಷಿ. ಯುವತಿಯನ್ನು ಇಷ್ಟು ದಿನಗಳ ನಂತರವೂ ಪತ್ತೆ ಹಚ್ಚಲಾಗಿಲ್ಲವೆಂದರೆ ಏನು ಅರ್ಥ. ಆಕೆಯೇನು ವಿಜಯಮಲ್ಯನೊ ಇಲ್ಲವೇ ನೀರವ್ ಮೋದಿಯೊ’ ಎಂದೂ ಸಿದ್ದರಾಮಯ್ಯ ವ್ಯಂಗ್ಯವಾಗಿ ಪ್ರಶ್ನಿಸಿದ್ದಾರೆ.

## ‘ತಾಕತ್ತಿದ್ದರೆ ಕನಕಪುರಕ್ಕೆ ಬನ್ನಿ’



ಕನಕಪುರ: ‘ಮಾಜಿ ಸಚಿವ ರಮೇಶ ಜಾರಕಿಹೊಳಿ ಕನಕಪುರಕ್ಕೆ ಬಂದರೆ ಇಲ್ಲಿನ ಸ್ವಾಭಿಮಾನಿ ಮಹಿಳೆಯರು ಚಪ್ಪಲಿ, ಪೊರಕೆಯಿಂದ ಸ್ವಾಗತ ಮಾಡುತ್ತಾರೆ’ ಎಂದು ವಿಧಾನ ಪರಿಷತ್ ಸದಸ್ಯ ಎಸ್.ರವಿ ಎಚ್ಚರಿಸಿದ್ದಾರೆ.

‘ಸಂತ್ರಸ್ತರಿಗೆ ನೆರವು ನೀಡುವುದು ವಿರೋಧ ಪಕ್ಷದ ನಾಯಕರ ಜವಾಬ್ದಾರಿ. ಡಿ.ಕೆ.ಶಿವಕುಮಾರ್ ಒಂದು ಪಕ್ಷದ ಅಧ್ಯಕ್ಷರಾಗಿ ನೊಂದ ಯುವತಿಯ ನೆರವಿಗೆ ನಿಂತರೆ ತಪ್ಪೇನು?’ ಎಂದು ಭಾನುವಾರ ಸುದ್ದಿಗೋಷ್ಠಿಯಲ್ಲಿ ಪ್ರಶ್ನಿಸಿದರು.

‘ಜಾರಕಿಹೊಳಿ ಕನಕಪುರಕ್ಕೆ ಬಂದು ಡಿ.ಕೆ.ಶಿವಕುಮಾರ್ ಅವರನ್ನು ಸೋಲಿಸುವುದಾಗಿ ಹೇಳಿದ್ದಾರೆ. ಅವರಿಗೆ ತಾಕತ್ತು ಇದ್ದರೆ ಇಲ್ಲಿಗೆ ಬರಲಿ.’ ಎಂದು ಸವಾಲು ಹಾಕಿದರು.

## ಬಿಜೆಪಿ 17 ಮುಖಂಡರ ಲೈಂಗಿಕ ಹಗರಣದ ಪಟ್ಟಿ ಇದೆ: ಲಕ್ಷ್ಮಣ್



ಮೈಸೂರು: ‘ಸಿ.ಡಿ ಪ್ರಕರಣ ಕುರಿತು ಮುಖ್ಯಮಂತ್ರಿ ಯಡಿಯೂರಪ್ಪ ಮೌನಿಯಾಗಿದ್ದಾರೆ. ತಮ್ಮನ್ನು ಕುರಿತ ಸಿ.ಡಿ., ಅವರ ಬಳಿ ಇರುವ ಕಾರಣ ಗಪ್‌ಚುಪ್ ಆಗಿದ್ದಾರೆ’ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಹೇಳಿದರು.

‘2009ರಿಂದ ಇಲ್ಲಿವರೆಗೆ ಲೈಂಗಿಕ ಪ್ರಕರಣದಲ್ಲಿ ಸಿಲುಕಿಕೊಂಡ ಬಿಜೆಪಿ ಶಾಸಕರು, ಸಂಸದರು ಹಾಗೂ ಮುಖಂಡರ 17 ಮಂದಿ ಪಟ್ಟಿ ನಮ್ಮ ಬಳಿ ಇದೆ. ಈಗ ಆರು ಮಂದಿ ಹೊಸದಾಗಿ ಸೇರಿದ್ದು, ನ್ಯಾಯಾಲಯದಿಂದ ಪ್ರತಿಬಂಧಕಾಜ್ಞೆ ತಂದಿದ್ದಾರೆ’ ಎಂದು ಭಾನುವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

‘ಯಡಿಯೂರಪ್ಪನವರೇ, ನಿಮ್ಮ ಸಿ.ಡಿ ಇದೆ ಎಂದು ಹೆದರಿಕೊಳ್ಳಬೇಡಿ. ನಿಮ್ಮನ್ನು ರಕ್ಷಣೆ ಮಾಡುವ ಕೆಲಸ ನಾವು ಮಾಡುತ್ತೇವೆ. ರಮೇಶ ಜಾರಕಿಹೊಳಿ ಅವರನ್ನು ಕೂಡಲೇ ಬಂಧಿಸಿ’ ಎಂದು ಆಗ್ರಹಿಸಿದರು.